**All India Radio: Bangalore**
**National Bulletin In Kannada**
**11.10.2026 1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**11.10.2026 1.10 p.m.**

**<><><><>**

ಮುಖ್ಯಾಂಶಗಳು

1. ಚೆನ್ನೈನಲ್ಲಿ ೧೩ ಸಾವಿರ ಕೋಟಿಯ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಚಾಲನೆ
2. ಇಂದಿನಿಂದ ನಾಡ ಹಬ್ಬ ಮೈಸೂರು ದಸರಾ ಮಹೋತ್ಸವ; ಗವಿಸಿದ್ದೇಶ್ವರ ಸ್ವಾಮೀಜಿಗಳಿಂದ ಉದ್ಘಾಟನೆ
3. ನವರಾತ್ರಿಗೆ ಉಪರಾಷ್ಟ್ರಪತಿ, ಪ್ರಧಾನಿ ಸೇರಿ ಹಲವು ಗಣ್ಯರಿಂದ ಶುಭಾಶಯ
4. ಭಾರತ - ವೆಸ್ಟ್ ಇಂಡೀಸ್ ಟಿ-೨೦ ಕ್ರಿಕೆಟ್ ಸರಣಿ; ಇಂದೋರ್‌ನಲ್ಲಿ ಇಂದು ಮೂರನೇ ಪಂದ್ಯ

<><><><>

ತಮಿಳುನಾಡು ಭೇಟಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಚೆನ್ನೈನಲ್ಲಿಂದು ಸುಮಾರು ೧೩ ಸಾವಿರ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದರು. ಸುಮಾರು ೪ ಸಾವಿರದ ೬೦೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಚೆನ್ನೈ ಮೆಟ್ರೋ ರೈಲು ಯೋಜನೆಯ ರೈಲು ಸೇವೆಗೆ ಪ್ರಧಾನಿ ಹಸಿರು ನಿಶಾನೆ ತೋರಿದರು. ಇದೇ ಸಂದರ್ಭದಲ್ಲಿ ಅವರು ಪೋರೂರು ಬೈಪಾಸ್ ನಿಲ್ದಾಣದಿಂದ ಪೂನಮಲ್ಲಿ ಬೈಪಾಸ್ ನಿಲ್ದಾಣದವರೆಗೆ ಮೆಟ್ರೋ ರೈಲಿನಲ್ಲಿ ಪ್ರಯಾಣಿಸಿ, ಬಳಿಕ ಹಿಂದಿರುಗಿದರು. ಪೂನಮಲ್ಲಿ-ಪೋರೂರು ಮಾರ್ಗದಲ್ಲಿ ೩.೭ ಕಿಲೋಮೀಟರ್ ಉದ್ದದ ವಿಶಿಷ್ಟ ದ್ವಿಮಹಡಿ ರಚನೆ ನಿರ್ಮಿಸಲಾಗಿದ್ದು, ಚಾಲಕರಹಿತ ರೈಲು ಸಂಚಾರಕ್ಕೆ ಅನುಕೂಲವಾಗುವ ಸುಧಾರಿತ ಸಂಕೇತ ವ್ಯವಸ್ಥೆಯನ್ನು ಅಳವಡಿಸಲಾಗಿತ್ತು. ಇದಲ್ಲದೆ, ಐದು ಅಮೃತ್ ರೈಲು ನಿಲ್ದಾಣಗಳು ಸೇರಿದಂತೆ ೭೫೦ ಕೋಟಿ ರೂಪಾಯಿಗೂ ಅಧಿಕ ವೆಚ್ಚದ ರೈಲ್ವೆ ಮೂಲಸೌಕರ್ಯ ಯೋಜನೆಗಳನ್ನು ಪ್ರಧಾನಿ ರಾಷ್ಟ್ರಕ್ಕೆ ಸಮರ್ಪಿಸಿದ್ದು, ಕೆಲವು ಯೋಜನೆಗಳನ್ನು ಉದ್ಘಾಟಿಸಿದರು. ಈ ವೇಳೆ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ

ಡಾ.ಎಲ್.ಮುರುಗನ್, ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

<><><><>

೪೧೬ನೇ ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವಕ್ಕೆ ಕೊಪ್ಪಳ ಗವಿಮಠದ ಅಭಿನವ ಗವಿಸಿದ್ಧೇಶ್ವರ ಸ್ವಾಮೀಜಿ ಅವರು ಬೆಳಗ್ಗೆ ೧೧.೫೦ರಿಂದ ಮಧ್ಯಾಹ್ನ ೧೨.೧೩ರ ನಡುವಿನ ಶುಭ ಧನುರ್ ಲಗ್ನದಲ್ಲಿ ಚಾಮುಂಡೇಶ್ವರಿ ದೇವಿಯ ಅಗ್ರಪೂಜೆ ನೆರವೇರಿಸುವ ಮೂಲಕ ಉತ್ಸವವನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದಂಪತಿ ಪೂಜೆ ಸಲ್ಲಿಸಿದರು. ಈ ವೇಳೆ, ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಸಚಿವ ಸಂಪುಟದ ಹಲವು ಸಚಿವರು, ಶಾಸಕರು ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಈ ವೇಳೆ ಸಾರ್ವಜನಿಕರಿಗೆ ನಿರ್ಬಂಧ ವಿಧಿಸಲಾಗಿತ್ತು. ಮಧ್ಯಾಹ್ನದ ಬಳಿಕ ಸಾರ್ವಜನಿಕರಿಗೆ ಎಂದಿನಂತೆ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ದಸರಾ ಹಿನ್ನೆಲೆ ಅರಮನೆಯಲ್ಲಿ ಯದುವೀರ್ ಒಡೆಯರ್ ಅವರಿಂದ ಖಾಸಗಿ ದರ್ಬಾರ್ ಸಹ ಇಂದು ಆರಂಭಗೊಂಡಿದೆ. ಇನ್ನು ದಸರಾ ಭದ್ರತೆಗೆ ೬ ಸಾವಿರಕ್ಕೂ ಹೆಚ್ಚು ಪೊಲೀಸರ ನಿಯೋಜನೆ ಮಾಡಲಾಗಿದ್ದು, ೫ ಸಾವಿರದ ೧೬೧ ಸಿವಿಲ್ ಹಾಗೂ ಸಂಚಾರಿ ಪೊಲೀಸರು, ೩೩ ಕೆಎಸ್‌ಆರ್‌ಪಿ ತುಕಡಿ, ೨೫ ಕಾರ್ ಮತ್ತು ಡಿಎಆರ್ ತುಕಡಿ, ೨೪ ಎಎಸ್‌ಸಿ ತುಕಡಿ, ೧ ಸಾವಿರದ ೫೦೦ ಹೋಮ್ ಗಾರ್ಡ್‌ಗಳನ್ನು ಭದ್ರತೆಗೆ ನಿಯೋಜನೆ ಮಾಡಲಾಗಿದೆ. ಸಿಸಿಟಿವಿಗಳ ಮೂಲಕ ಎಲ್ಲಡೆ ಕಣ್ಗಾವಲು ಇಡಲಾಗಿದೆ. ಸಾಂಸ್ಕೃತಿಕ ನಗರಿಯ ಪ್ರಮುಖ ರಸ್ತೆಗಳು ವಿದ್ಯುತ್ ದೀಪಾಲಂಕಾರದಿಂದ ಕಂಗೊಳಿಸುತ್ತಿದ್ದು, ದೇಶ-ವಿದೇಶಗಳಿಂದ ಬರುವ ಪ್ರವಾಸಿಗರ ಮನ ಸೆಳೆಯುತ್ತಿದೆ.

<><><><>

ದುರ್ಗಾದೇವಿಯ ಆರಾಧನೆಯ ೯ ದಿನಗಳ ನವರಾತ್ರಿ ಉತ್ಸವವು ದೇಶಾದ್ಯಂತ ಇಂದು ಧಾರ್ಮಿಕ ಶ್ರದ್ಧೆ ಮತ್ತು ಸಂಭ್ರಮದಿಂದ ಆರಂಭವಾಗುತ್ತಿದೆ. ನವರಾತ್ರಿಯ ಸಂದರ್ಭದಲ್ಲಿ ದುರ್ಗಾದೇವಿಯ ಒಂಬತ್ತು ರೂಪಗಳನ್ನು ಪೂಜಿಸಲಾಗುತ್ತದೆ. ಮೊದಲ ದಿನದಂದು ದುರ್ಗಾದೇವಿಯನ್ನು ಶೈಲಪುತ್ರಿ ದೇವಿಯ ರೂಪದಲ್ಲಿ ಆರಾಧಿಸಲಾಗುತ್ತದೆ. ಶೈಲಪುತ್ರಿ ದೇವಿಯು ಶಕ್ತಿ, ಸ್ಥಿರತೆ ಹಾಗೂ ಹೊಸ ಆರಂಭಗಳ ಸಂಕೇತವಾಗಿದ್ದಾಳೆ. ನವರಾತ್ರಿಯ ಸಂದರ್ಭದಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಹಲವು

ಗಣ್ಯರು ಜನತೆಗೆ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಉಪರಾಷ್ಟ್ರಪತಿ, ಜಗದಂಬೆಯ ಕೃಪೆಯಿಂದ ಬಲಿಷ್ಠ, ಸಮೃದ್ಧ ಮತ್ತು ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸುವ ಸಂಕಲ್ಪವನ್ನು ಸರ್ಕಾರ ಈಡೇರಿಸಲಿ ಎಂಬ ಆಶಯ ವ್ಯಕ್ತಪಡಿಸಿದ್ದಾರೆ. ಮಾತೆ ಜಗದಂಬಾ ಅವರ ಆಶೀರ್ವಾದವು ಎಲ್ಲರಿಗೂ ಸಂತೋಷ, ಶಾಂತಿ, ಸಮೃದ್ಧಿ ಮತ್ತು ಉತ್ತಮ ಆರೋಗ್ಯವನ್ನು ಕರುಣಿಸಲಿ ಎಂದು ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪ್ರಾರ್ಥಿಸಿದ್ದಾರೆ.

<><><><>

ಭಾರತದ ಸ್ವಾತಂತ್ರ್ಯ ಹೋರಾಟಗಾರ, ಸಮಾಜವಾದಿ ನಾಯಕ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳ ಪ್ರತಿಪಾದಕರಾದ ಲೋಕನಾಯಕ ಜಯಪ್ರಕಾಶ್ ನಾರಾಯಣ್ ಅವರ ಜನ್ಮವಾರ್ಷಿಕೋತ್ಸವ ಇಂದು. ೧೯೦೨ರ ಅಕ್ಟೋಬರ್ ೧೧ರಂದು ಬಿಹಾರದ ಸಿತಾಬ್ ದಿಯಾರಾ ಗ್ರಾಮದಲ್ಲಿ ಜನಿಸಿದ ಜಯಪ್ರಕಾಶ್ ನಾರಾಯಣ್ ಅವರು, ಸ್ವಾತಂತ್ರ್ಯ ಹೋರಾಟದಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು. ೧೯೭೯ರ ಅಕ್ಟೋಬರ್ ೮ರಂದು ಅವರು ನಿಧನರಾದರು. ಅವರ ಜನ್ಮದಿನದಂದು ದೇಶವು ಅವರ ಸೇವೆ ಮತ್ತು ಆದರ್ಶಗಳನ್ನು ಸ್ಮರಿಸುತ್ತದೆ. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸೇರಿದಂತೆ ಹಲವು ಗಣ್ಯರು ಜಯಪ್ರಕಾಶ್ ನಾರಾಯಣ್ ಜನ್ಮದಿನದ ಅಂಗವಾಗಿ ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ನರೇಂದ್ರ ಮೋದಿ, ಜಯಪ್ರಕಾಶ್ ನಾರಾಯಣ್ ಅವರ ಕರೆ ಪೀಳಿಗೆಗಳನ್ನು ಮೀರಿ ಜನರಿಗೆ ಸ್ಫೂರ್ತಿ ನೀಡಿದ್ದು, ಸಾರ್ವಜನಿಕ ಜೀವನವನ್ನು ರಾಷ್ಟ್ರದ ಪುನರುತ್ಥಾನದ ಸಾಧನವಾಗಿ ಕಾಣುವಂತೆ ಪ್ರೇರೇಪಿಸಿದೆ ಎಂದು ಹೇಳಿದ್ದಾರೆ.

<><><><>

'ಜನ ಸೇವೆಯೇ ದೇಶ ಸೇವೆ' ಎಂಬ ಮನೋಭಾವದೊಂದಿಗೆ ನಾಗರಿಕರ ಅಭ್ಯುದಯಕ್ಕೆ ಬದ್ಧತೆಯಿಂದ ೨೫ ವರ್ಷಗಳ ಸಾರ್ವಜನಿಕ ಸೇವೆಯನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಉತ್ತಮ ಆಡಳಿತದ ಮುನ್ನೋಟದೊಂದಿಗೆ ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗಲು ಸರ್ಕಾರ ಕಾರ್ಯಪ್ರವೃತ್ತವಾಗಿದೆ. ಈ ನಿಟ್ಟಿನಲ್ಲಿ ಹಲವು ವಲಯಗಳಲ್ಲಿ ಕೈಗೊಂಡಿರುವ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು

ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದು ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ ೨ ಕುರಿತ ಒಂದು ವರದಿ. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ ಎರಡನ್ನು ೨೦೨೨ ರ ನವೆಂಬರ್ ೧೧ರಂದು ತೆರೆಯಲಾಯಿತು ಮತ್ತು ಬೆಂಗಳೂರಿನ ವಾರ್ಷಿಕ ಪ್ರಯಾಣಿಕರ ಸಾಮರ್ಥ್ಯವನ್ನು ಸುಮಾರು ೨.೫ ಕೋಟಿಯಿಂದ ಐದರಿಂದ ಆರು ಕೋಟಿಗೆ ದ್ವಿಗುಣಗೊಳಿಸಿತು. ೧೦ ಸಾವಿರ ಚದರ ಮೀಟರ್ ಗಿಂತ ಹೆಚ್ಚು ಹಸಿರು ಗೋಡೆಗಳು, ನೇತಾಡುವ ಉದ್ಯಾನಗಳು ಮತ್ತು ಹೊರಾಂಗಣ ಉದ್ಯಾನಗಳು ಶೇಕಡಾ ೧೦೦ ರಷ್ಟು ನವೀಕರಿಸಬಹುದಾದ ಇಂಧನದಿಂದ ಚಲಿಸುವ ಕ್ಯಾಂಪಸ್ ಅನ್ನು ಸುತ್ತುವರೆದಿವೆ. ಟರ್ಮಿನಲ್ ಪಕ್ಕದಲ್ಲಿ ೧೫೩೭ರಲ್ಲಿ ಬೆಂಗಳೂರಿನ ಸಂಸ್ಥಾಪಕ ನಾಡಪ್ರಭು ಕೆಂಪೇಗೌಡ ಅವರ ೧೦೮ ಅಡಿ ಎತ್ತರದ ಬೃಹತ್ ಪ್ರತಿಮೆಯನ್ನು ನಿರ್ಮಿಸಲಾಗಿದೆ. ಇದು ಅವರ ಅತಿ ಎತ್ತರದ ಕಂಚಿನ ಪ್ರತಿಮೆಯಾಗಿದ್ದು, ಅವರ ಕೈಯಲ್ಲಿರುವ ಕತ್ತಿ ಸುಮಾರು ನಾಲ್ಕು ಟನ್ ತೂಕವಿದೆ.

<><><><>

ಪ್ರಧಾನ ಮಂತ್ರಿ ಧನ್-ಧಾನ್ಯ ಕೃಷಿ ಯೋಜನೆ ಇಂದಿಗೆ ಒಂದು ವರ್ಷ ಪೂರೈಸಿದೆ. ದೇಶಾದ್ಯಂತ ೧೦೦ ಮಹತ್ವಾಕಾಂಕ್ಷೆಯ ಕೃಷಿ ಜಿಲ್ಲೆಗಳಲ್ಲಿ ಕೃಷಿಯನ್ನು ಬಲಪಡಿಸಲು ಕಳೆದ ವರ್ಷ ಇದೇ ದಿನ ಈ ಯೋಜನೆಯನ್ನು ಪ್ರಾರಂಭಿಸಲಾಗಿತ್ತು. ಜಿಲ್ಲೆಯ ನಿರ್ದಿಷ್ಟ ಕೃಷಿ ಅಗತ್ಯಗಳನ್ನು ಪೂರೈಸಲು ರಾಜ್ಯ ಯೋಜನೆಗಳು ಮತ್ತು ಖಾಸಗಿ ವಲಯದ ಭಾಗವ ಹಿಸುವಿಕೆಯೊಂದಿಗೆ ೧೧ ಸಚಿವಾಲಯಗಳು ಮತ್ತು ಇಲಾಖೆಗಳಲ್ಲಿ ೩೬ ಕೇಂದ್ರ ಯೋಜನೆಗಳನ್ನು ಈ ಯೋಜನೆಯು ಒಟ್ಟುಗೂಡಿಸಿದೆ.

<><><><>

ಇಂದು ಇಂದೋರ್ ನ ಹೋಳ್ಕರ್ ಕ್ರೀಡಾಂಗಣದಲ್ಲಿ ಭಾರತ ಮತ್ತು ವೆಸ್ಟ್ ಇಂಡೀಸ್ ನಡುವಿನ ೩ನೇ ಟಿ೨೦ ಅಂತಾರಾಷ್ಟ್ರೀಯ ಕ್ರಿಕೆಟ್ ನಡೆಯಲಿದೆ. ಪಂದ್ಯವು ಭಾರತೀಯ ಕಾಲಮಾನ ಸಂಜೆ ೭ಗಂಟೆಗೆ ಪ್ರಾರಂಭವಾಗಲಿದೆ. ರಾಂಚಿಯಲ್ಲಿ ಶುಕ್ರವಾರ ಸಂಜೆ ನಡೆದ ಎರಡನೇ ಟಿ೨೦ ಪಂದ್ಯದಲ್ಲಿ ವೆಸ್ಟ್ ಇಂಡೀಸ್, ಆರು ವಿಕೆಟ್ ಗಳಿಂದ ಭಾರತವನ್ನು ಸೋಲಿಸಿದ ನಂತರ ಐದು ಪಂದ್ಯಗಳ ಸರಣಿ ೧-೧ ರಲ್ಲಿ ಸಮಬಲಗೊಂಡಿದೆ.

ವೆಸ್ಟ್ ಇಂಡೀಸ್ ನಾಯಕ ಶಾಯ್ ಹೋಪ್ ೪೫ ಎಸೆತಗಳಲ್ಲಿ ೧೦೨ ರನ್ ಗಳಿಸಿದರೆ, ಶೆರ್ಫೇನ್ ರುದರ್ಫೋರ್ಡ್ ೩೭ ಎಸೆತಗಳಲ್ಲಿ ೮೪ ರನ್ ಗಳಿಸಿದರು. ಅವರ ಅತ್ಯುತ್ತಮ ಪ್ರದರ್ಶನಕ್ಕಾಗಿ

ಹೋಪ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು. ಇದಕ್ಕೂ ಮುನ್ನ ಭಾರತ ತನ್ನ ನಿಗದಿತ ೨೦ ಓವರ್ ಗಳಲ್ಲಿ ಐದು ವಿಕೆಟ್ ನಷ್ಟಕ್ಕೆ ೨೪೯ ರನ್ ಗಳಿಸಿತು.

<><><><>

ಚೀನಾದಲ್ಲಿ ನಡೆಯಲಿರುವ ೨೦೨೬ರ ೧೭ ವರ್ಷದೊಳಗಿನವರ ಮಹಿಳಾ ಏಷ್ಯನ್ ಕಪ್ ಫುಟ್‌ಬಾಲ್ ಪಂದ್ಯಾವಳಿಯಲ್ಲಿ ಪಾಲ್ಗೊಳ್ಳಲು ಅರ್ಹತಾ ಪಂದ್ಯ ಇಂದು ಮಲೇಷ್ಯಾದ ಎಂಪಿ ಸೆಲಾಯಾಂಗ್ ಕ್ರೀಡಾಂಗಣದಲ್ಲಿ ನಡೆಯಲಿದೆ. ಈ ನಿರ್ಣಾಯಕ ಇ ಗುಂಪಿನ ಪಂದ್ಯದಲ್ಲಿ ಭಾರತದ ಮಹಿಳಾ ಫುಟ್‌ಬಾಲ್ ತಂಡ, ಆತಿಥೇಯ ಮಲೇಷ್ಯಾವನ್ನು ಎದುರಿಸಲಿದೆ. ಪಂದ್ಯದಲ್ಲಿ ಡ್ರಾ ಸಾಧಿಸಿದರೂ ಭಾರತಕ್ಕೆ ಅರ್ಹತೆ ಸಿಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>